ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**ARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಮಂಡಲದ ಅಧಿವೇಶನ

ತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 25/8/2020

# ವಿಧಾನಸೌಧದಲ್ಲೇ ಅಧಿವೇಶನ

ಬೆಂಗಳೂರು: ವಿಧಾನಸೌಧದಲ್ಲೇ ಮಳೆಗಾಲದ ಅಧಿವೇಶನ ನಡೆಸಲು ಸರ್ಕಾರ ತೀರ್ಮಾನ ಕೈಗೊಂಡಿದೆ. ಸಿಎಂ ಯಡಿಯೂರಪ್ಪ ಇತ್ತೀಚೆಗೆ ನಡೆದ ಸಂಪುಟ ಸಭೆಯಲ್ಲಿ ವಿಧಾನಸಭೆ ಸ್ಪೀಕರ್, ವಿಧಾನಪರಿಷತ್ ಸಭಾಪತಿ ಅವರೊಂದಿಗೆ ಚರ್ಚಿಸಿ ಅಧಿವೇಶನದ ಸ್ಥಳ ಸೇರಿ ರೂಪುರೇಷೆ ಸಿದ್ಧಪಡಿಸಲು ಸಚಿವ ಮಾಧುಸ್ವಾಮಿ ಅವರಿಗೆ ಸೂಚಿಸಿದ್ದರು. ಅಧಿವೇಶನ ನಡೆಸುವ ಸಾಧ್ಯಾಸಾಧ್ಯತೆ ಕುರಿತಂತೆ ಸ್ಪೀಕರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ವಿಜಯಭಾಸ್ಕರ್, ವಿಧಾನಸಭೆಯ ಹಿರಿಯ ಅಧಿಕಾರಿಗಳೊಂದಿಗೆ ವಿಧಾನಸಭೆಯ ಸಭಾಂಗಣವನ್ನು ವೀಕ್ಷಿಸಿದ ನಂತರ ಮಾಧುಸ್ವಾಮಿ ಸುದ್ದಿಗಾರರಿಗೆ ವಿವರಣೆ ನೀಡಿದರು.



ಅಧಿವೇಶನಕ್ಕೆ ಸಾಮಾಜಿಕ ಅಂತರ ಕಾಪಾಡಿಕೊಂಡು, ಫೇಸ್‌ಶೀಲ್ಡ್, ಮಾಸ್ಕ್ ಕಡ್ಡಾಯಗೊಳಿಸಲಾಗುತ್ತದೆ. ಸೀಟ್ ಮಧ್ಯೆ ಗಾಜಿನ ಪರದೆ ಹಾಕುತ್ತೇವೆ. ಅಧಿಕಾರಿಗಳು, ಪ್ರಧಾನ ಕಾರ್ಯದರ್ಶಿಗಳಿಗೆ ಮಾತ್ರ ಅಧಿವೇಶನಕ್ಕೆ ಅವಕಾಶವಿದೆ. ಪತ್ರಕರ್ತರಿಗೂ ಎರಡು ಗ್ಯಾಲರಿ ಮಾಡಲು ತೀರ್ಮಾನ ಮಾಡಲಾಗಿದೆ. ಬಗ್ಗೆ ಪತ್ರಕರ್ತರ ಜತೆ ಚರ್ಚೆ ಮಾಡಿ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಮಾಧುಸ್ವಾಮಿ ತಿಳಿಸಿದರು.